ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ,
ಶ್ರೀರಂಗಪಟ್ಟಣ. DW-1

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿ ೦ಃ 22.07.2025

ಪಾಟೀ ಸವಾಲುಃ ದೂರುದಾರರ ಪರ ವಕೀಲರಿಂದಃ

ಬೂಕನಕೆರೆ ಶಾಖೆಯಲ್ಲಿ ಎಸ್.ಬಿ.ಐ ಬ್ಯಾಂಕಿನಲ್ಲಿ ಈಗಲೂ ನೀವು ನಿಮ್ಮ ಖಾತೆಯನ್ನು ಚಾಲ್ತಿಯಲ್ಲಿ ಇಟ್ಟುಕೊಂಡಿರುತ್ತೀರಿ ಎಂಬ ಪ್ರಶ್ನೆಗೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ. ನಿಮ್ಮ ಖಾತೆಗೆ ಸಂಬಂಧಿಸಿದಂತೆ ನೀವು ನಿಮ್ಮ ಬ್ಯಾಂಕ ಮಾನ್ಯೇಜರ್ ಗೆ ಯಾವುದಾದರೂ ದೂರನ್ನು ನೀಡಿರುತ್ತೀರಿ ಎಂಬ ಪ್ರಶ್ನೆಗೆ ಇಲ್ಲವೆಂದು ನುಡಿಯುತ್ತಾರೆ.

ಪ್ರತ್ಯುತ್ತರ ನೋಟೀಸ್ ಅನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಆ ರೀತಿ ನಾನು ಯಾವುದೇ ಪ್ರತ್ಯುತ್ತರ ನೋಟೀಸ್ ನೀಡದೇ ಇರುವ ಕಾರಣ ಸದರಿ ಪ್ರತ್ಯುತ್ತರ ನೋಟೀಸ್ ಅನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ.

ಕೆ.ಆರ್.ಪೇಟೆ ಗ್ರಾಮಾಂತರ ಪೋಲೀಸ್ ಠಾಣೆಯಲ್ಲಿ ನೀಡಿರುವ ದೂರಿಗೆ ಸಂಬಂಧಿಸಿದಂತೆ ಯಾವುದಾದರೂ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೀರಾ ಎಂಬ ಪ್ರಶ್ನೆಗೆ ಸಾಕ್ಷಿಯು ಇಲ್ಲವೆಂದು ನುಡಿಯುತ್ತಾರೆ. ಸಾಕ್ಷಿ ಮೂಂದುವರೆದು ಹಾಜರುಪಡಿಸುತ್ತೇನೆಂದು ನುಡಿಯುತ್ತಾರೆ.

ಪಾಂಡವಪುರ ನ್ಯಾಯಾಲಯದಲ್ಲಿ ಸುನೀತಾ ರವರ ಅಕ್ಕ ವಿನುತಾ ರವರು ನನ್ನ ವಿರುದ್ಧ ಸಿಸಿ.685/2022 ರಂತೆ ಪ್ರಕರಣವನ್ನು ದಾಖಲಿಸಿದ್ದರು ಎಂದರೆ ಸಾಕ್ಷಿಯು ಪ್ರಕರಣವನ್ನು ದಾಖಲಿಸಿದ್ದು ಅದರ ಸಂಖ್ಯೆ ಗೊತ್ತಿರುವುದಿಲ್ಲವೆಂದು ನುಡಿಯುತ್ತಾರೆ. ಸದರಿ ಪ್ರಕರಣದಲ್ಲಿ ನಾನು ತಪಿತಸ್ಥ ಎಂದು ನ್ಯಾಯಾಲಯವು ತೀರ್ಮಾನಿಸಿ ದಂಡವನ್ನು ಸಹ ಪಾವತಿಸಬೇಕೆಂದು ಆದೇಶ ಮಾಡಿರುತ್ತದೆ ಎಂದರೆ ಸಾಕ್ಷಿಯು ಗೊತ್ತಿಲ್ಲವೆಂದು ನುಡಿಯುತ್ತಾರೆ. ಸದರಿ ಆದೇಶದ ವಿರುದ್ಧ ನಾನುನ ಅಪೀಲು ಸಲ್ಲಿಸಿರುತ್ತೇನೆ ಎಂದರೆ ಸರಿ.

(ಈ ಹಂತದಲ್ಲಿ ಮಾನ್ಯ ದೂರುದಾರರ ಪರ ವಕೀಲರು ಸಾಕ್ಷಿಯ ಪಾಟಿ ಸವಾಲಿಗಾಗಿ ಸಮಯಾವಕಾಶ ಕೋರಿದ್ದು ಮುಂದೂಡಲಾಗಿದೆ).

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.